**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಶ್ರೀ ಸಿ.ಬಿ. ಕುಂಬಾರ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಮುದ್ದೇಬಿಹಾಳ ಹಾಗೂ ಶ್ರೀ ಖುಬಾಸಿಂಗ್ ಜಾಧವ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡವಳಗಿ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧದ ಲೋಕಾಯುಕ್ತ ಇಲಾಖಾ ವಿಚಾರಣೆಯ ಕುರಿತು- ಅಂತಿಮ ಆದೇಶ.

**ಓದಲಾಗಿದೆ:**

1. ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿ ಸಲ್ಲಿಸಿರುವ ವರದಿ ಸಂಖ್ಯೆ: ಕಂಪ್ಲೆಂಟ್ / ಉಪಲೋಕ್ / ಬಿ.ಜಿ.ಎಂ / 139 / 2016 / ಪಿಪಿ, ದಿನಾಂಕ: 06.02.2017.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರ ಅ.ಸ. ಪತ್ರ ಸಂಖ್ಯೆ: ಕಪ್ಲೆಂಟ್ / ಉಪಲೋಕ್ / ಬಿ.ಜಿ.ಎಂ / 139 / 2016 / ಪಿಪಿ, ದಿನಾಂಕ:21.02.2017.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 72 ವಿಸೇಬಿ 2017, ದಿನಾಂಕ: 22.03.2017.
4. ಅಪರ ನಿಬಂಧಕರು, ವಿಚಾರಣೆಗಳು-15, ಕರ್ನಾಟಕ ಲೋಕಾಯುಕ್ತ ಇವರ ವಿಚಾರಣಾ ವರದಿ ಸಂಖ್ಯೆ: ಉಪಲೋಕ್-1/ಡಿಇ/543/2017/ಎಆರ್ಇ-15, ದಿನಾಂಕ: 27.06.2022.
5. ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸು ಸಂಖ್ಯೆ: ಉಪಲೋಕ್-1/ಡಿಇ/543/2017/ಎಆರ್ಇ-15, ದಿನಾಂಕ: 29.06.2022..

**ಪ್ರಸ್ತಾವನೆ:**

ಮಾನ್ಯ ಉಪ ಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿದ್ದ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ವರದಿ ಮತ್ತು ದಾಖಲೆಗಳನ್ನು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರದೊಂದಿಗೆ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸರ್ಕಾರಕ್ಕೆ ಕಳುಹಿಸಿ ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮ ಬಗ್ಗೆ ತಿಳಿಸುವಂತೆ ಕೋರಿದ್ದರು.

ಮಾನ್ಯ ಉಪ ಲೋಕಾಯುಕ್ತರವರ ವರದಿ ಹಾಗೂ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡ ಅಧಿಕಾರಿ / ನೌಕರರು ಮುದ್ದೇಬಿಹಾಳ ತಾಲ್ಲೂಕಿನ ಹಳ್ಳೂರು ಗ್ರಾಮದಲ್ಲಿ ವಾಸವಿರುವ ಶ್ರೀ ಶಿವಪ್ಪ ಶೀತವ್ವ ಮಾದರ ಇವರು ಅವರ ಮನೆಯ ಪಕ್ಕದಲ್ಲಿನ ತಾರನಾಳ ರಸ್ತೆ ಹತ್ತಿರದ 100X100 ಅಡಿ ಅಳತೆಯ ಜಾಗವನ್ನು ಕಾನೂನುಬಾಹಿರವಾಗಿ ಅತಿಕ್ರಮಣ ಮಾಡಿದ್ದಾರೆಂದು ಸದರಿ ಜಾಗವು ಸರ್ಕಾರಿ ಜಾಗವೋ ಅಥವಾ ಖಾಸಗಿ ಜಾಗವೋ ಎಂಬ ಬಗ್ಗೆ ಪರಿಶೀಲನೆ ಮಾಡಿ ವರದಿ ಸಲ್ಲಿಸಲು ಎದುರುದಾರರಿಗೆ ತಿಳಿಸಿದ್ದರೂ ಸಹ ಎದುರುದಾರರು ಯಾವುದೇ ಕ್ರಮ ಜರುಗಿಸಿರುವುದಿಲ್ಲ. ವಿಜಯಪುರದ ಉಪ ವಿಭಾಗಾಧಿಕಾರಿಗಳು, ಮುದ್ದೇಬಿಹಾಳದ ತಹಶೀಲ್ದಾರ್‌ರವರಿಗೆ ದೂರಿನ ಬಗ್ಗೆ ಖುದ್ದಾಗಿ ಸ್ಥಳ ಪರಿಶೀಲನೆ ಮಾಡಿ ಜಾಗವು ಸರ್ಕಾರಿ ಜಮೀನೋ ಅಥವಾ ಖಾಸಗಿ ಜಮೀನೋ ಎಂಬುದನ್ನು ಖಾತರಿಪಡಿಸಿಕೊಂಡು ವರದಿ ಸಲ್ಲಿಸಲು ಸೂಚಿಸಿದ್ದು, ಈ ಬಗ್ಗೆ ಎದುರುದಾರರು ಯಾವುದೇ ಕ್ರಮ ಜರುಗಿಸದೇ ಹಿರಿಯ ಅಧಿಕಾರಿಗಳ ಆದೇಶವನ್ನು ಉಲ್ಲಂಘಿಸಿ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬಂದ ಹಿನ್ನಲೆಯಲ್ಲಿ ಅವರುಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ 14(ಎ)ರನ್ವಯ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಿ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಆದೇಶವನ್ನು ಹೊರಡಿಸಲಾಗಿತ್ತು.

1. ಶ್ರೀ ಖೂಬಾಸಿಂಗ್ ಜಾಧವ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಢವಳಗಿ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ.
2. ಶ್ರೀ ಸಿ.ಬಿ. ಕುಂಬಾರ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಮುದ್ದೇಬಿಹಾಳ, ವಿಜಯಪುರ ಜಿಲ್ಲೆ.

ಮಾನ್ಯ ಉಪ ಲೋಕಾಯುಕ್ತರವರು ದಿನಾಂಕ:15.04.2017 ರ ಆದೇಶದಲ್ಲಿ ಅಪರ ನಿಬಂಧಕರು, ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದು, ತದನಂತರ ದಿನಾಂಕ: 02.11.2018ರ ಆದೇಶದಲ್ಲಿ ಪ್ರಕರಣದ ವಿಚಾರಣಾಧಿಕಾರಿನ್ನಾಗಿ ಅಪರ ನಿಬಂಧಕರು ವಿಚಾರಣೆಗಳು-15 ಇವರನ್ನು ಪ್ರಕರಣದ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಿ ಆದೇಶಿಸಿರುತ್ತಾರೆ. ವಿಚಾರಣಾಧಿಕಾರಿಯವರು ಪ್ರಕರಣದ ಕುರಿತು ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಿ ಅದರನ್ವಯ ಪ್ರಕರಣದಲ್ಲಿನ ಆಪಾದಿತ ಅಧಿಕಾರಿ / ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವುದಿಲ್ಲವೆಂದು ಮಾನ್ಯ ಉಪ ಲೋಕಾಯುಕ್ತರವರಿಗೆ ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವಿಚಾರಣಾ

ವರದಿಯನ್ನು ಪರಿಶೀಲಿಸಿರುವ ಮಾನ್ಯ ಉಪಲೋಕಾಯುಕ್ತರವರು ಸದರಿ ವಿಚಾರಣಾ ವರದಿಯನ್ನು ಒಪ್ಪಿ ಪ್ರಕರಣದಲ್ಲಿನ ಆಪಾದಿತ ಅಧಿಕಾರಿ / ನೌಕರರನ್ನು ದೋಷಾರೋಪಮುಕ್ತಗೊಳಿಸುವಂತೆ ಮೇಲೆ ಓದಲಾದ (5)ರಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಪ್ರಕರಣಕ್ಕೆ ಸಂಬಂಧಿಸಿದ ಲೋಕಾಯುಕ್ತ ಕಛೇರಿಯ ಇಲಾಖಾ ವಿಚಾರಣಾ ವರದಿ ಮತ್ತು ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸು ಹಾಗೂ ಅದರೊಂದಿಗಿನ ಸಂಬಂಧಪಟ್ಟ ದಾಖಲೆಗಳನ್ನು ಸರ್ಕಾರದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಪ್ರಕರಣದಲ್ಲಿನ ಆರೋಪಿತ ಅಧಿಕಾರಿ / ನೌಕರರ ವಿರುದ್ಧದ ಆರೋಪಗಳು ಕಛೇರಿಯ ಲೋಕಾಯುಕ್ತ ಇಲಾಖಾ ವಿಚಾರಣೆಯಲ್ಲಿ ಸಾಬೀತಾಗದೇ ಇರುವುದರಿಂದ ಅವರುಗಳನ್ನು ಅವರುಗಳ ವಿರುದ್ಧದ ಆರೋಪಗಳಿಂದ ದೋಷ ಮುಕ್ತಗೊಳಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 111 ವಿಸೇಬಿ 2022 ಬೆಂಗಳೂರು**

**ದಿನಾಂಕ: 24.08.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪ್ರಕರಣದಲ್ಲಿನ ಶ್ರೀ ಸಿ.ಬಿ. ಕುಂಬಾರ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಮುದ್ದೇಬಿಹಾಳ (ಮೂಲತ: ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಅಧಿಕಾರಿ) ಹಾಗೂ ಶ್ರೀ ಖೂಬಾಸಿಂಗ್ ಜಾಧವ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಡವಳಗಿ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳನ್ನು ಅವರುಗಳ ವಿರುದ್ಧದ ಆರೋಪಗಳಿಂದ ದೋಷ ಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

24/08/2022
**(ಬಾಲಪ್ಪ)**
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
(ಸೇ-ಬಿ&ಸಿ))

24/08/2022

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

....4

3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ವಿಜಯಪುರ ಜಿಲ್ಲೆ
4. ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾಮ ಪಂಚಾಯಿತಿ ಶಾಖೆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸಂಬಂಧಪಟ್ಟ ಅಧಿಕಾರಿಗೆ (ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ವಿಜಯಪುರ ಇವರ ಮುಖಾಂತರ).
6. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿಯವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ-2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.